ಕರ್ನಾಟಕ ವಿಧಾನ ಪರಿಷತ್ತು
143ನೇ ಅಧಿವೇಶನ

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ	72(196)
ಸದಸ್ಯರ ಹೆಸರು	ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ಸಚಿವರು	ಮಾನ್ಯ ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ)
ಉತ್ತರಿಸಬೇಕಾದ ದಿನಾಂಕ:	01.02.2021

ಪ್ರಶ್ನೆ		ಉತ್ತರ
(ಅ)	ಬೆಂಗಳೂರು ವಿಶ್ವವಿದ್ಯಾನಿಲಯವನ್ನು ವಿಭಜನೆ ಮಾಡಿ ಬೆಂಗಳೂರು ನಗರ ವಿಶ್ವವಿದ್ಯಾನಿಲಯ ಸೆಂಟ್ರಲ್ ಕಾಲೇಜ್ ಕ್ಯಾಂಪಸ್‌ನಲ್ಲಿ ಕಳೆದ 3 ವರ್ಷಗಳಿಂದ ಕಾರ್ಯ ನಿರ್ವಹಿಸುತ್ತಿರುವುದು ನಿಜವೇ;	ಹೌದು
(ಆ)	ಈ ವಿಶ್ವವಿದ್ಯಾನಿಲಯದಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಹಾಗೂ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿನಿಲಯ ಸೌಲಭ್ಯ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ
(ಇ)	ಈ ವಿದ್ಯಾರ್ಥಿಗಳಿಗಾಗಿ ಮೆಟ್ರಿಕ್ ನಂತರ ವಿದ್ಯಾರ್ಥಿ ನಿಲಯವನ್ನು ಸೆಂಟ್ರಲ್ ಕಾಲೇಜ್ ಕ್ಯಾಂಪಸ್‌ನಲ್ಲಿ 2021-2022ನೇ ಸಾಲಿನಿಂದ ಪ್ರಾರಂಭ ಮಾಡಲಾಗುವುದೇ?	2021-22ನೇ ಸಾಲಿನ ಆಯವ್ಯಯದಲ್ಲಿ ಸಮಾಜಕಲ್ಯಾಣ ಇಲಾಖೆಗೆ ಮೀಸಲಿಡಲಾಗುವ ಹಣದಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಸೇರಿದ ವಿದ್ಯಾರ್ಥಿಗಳಿಗೆ ಸೆಂಟ್ರಲ್ ಕಾಲೇಜ್ ಕ್ಯಾಂಪಸ್‌ನಲ್ಲಿ ವಸತಿ ನಿಲಯ ನಿರ್ಮಿಸುವ ಉದ್ದೇಶಕ್ಕಾಗಿ ಅನುದಾನವನ್ನು ಪಡೆಯಲು ಬೆಂಗಳೂರು ನಗರ ವಿಶ್ವವಿದ್ಯಾಲಯದಿಂದ ಸಲ್ಲಿಸಲಾದ ಪ್ರಸ್ತಾವನೆಯನ್ನು ಪರಿಶೀಲಿಸಲಾಗುತ್ತಿದೆ.

ಸಂಖ್ಯೆ: ಇಡಿ 16 ಯುಬಿವಿ 2021

(ಡಾ॥ ಅಶ್ವಥ್ ನಾರಾಯಣ ಸಿ.ಎನ್.)
ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ, ಐಟಿ ಮತ್ತು ಬಿಟಿ,
ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ)